ಕರ್ನಾಟಕ ಸರ್ಕಾರ
ಕಂದಾಯ ಇಲಾಖೆ

ಸಂಖ್ಯೆ: ಕಂಇ/ಎಜೆಎಸ್‌ಕೆ/ಆಡಳಿತ-37/13-14

ನಿರ್ದೇಶಕರ ಕಾರ್ಯಾಲಯ,
ಅಟಲ್‌ಜೀ ಜನಸ್ನೇಹಿ ನಿರ್ದೇಶನಾಲಯ,
ಕೆ.ಆರ್.ವೃತ್ತ, ಬೆಂಗಳೂರು.
ದಿನಾಂಕ: 24.06.2017

ಎಲ್ಲಾ ಜಿಲ್ಲಾಧಿಕಾರಿಗಳು,

ಮಾನ್ಯರೇ,

ವಿಷಯ: ಅಲ್ಪ ಸಂಖ್ಯಾತರ ಪ್ರಮಾಣ ಪತ್ರಗಳನ್ನು ಅಟಲ್‌ಜೀ ಜನಸ್ನೇಹಿ ಕೇಂದ್ರದ ತಂತ್ರಾಂಶದಲ್ಲಿ ಅಳವಡಿಸಿರುವ ಬಗ್ಗೆ.

ಉಲ್ಲೇಖ:
1. ಕೇಂದ್ರ ಸರ್ಕಾರದ ಅಲ್ಪ ಸಂಖ್ಯಾತರ ಕಲ್ಯಾಣ ಮಂತ್ರಾಲಯದ ಅಧಿಸೂಚನೆ ಸಂಖ್ಯೆ: 816 ಇ; ದಿನಾಂಕ: 23.10.1993.
2. ಕೇಂದ್ರ, ಸರ್ಕಾರದ ಅಲ್ಪ ಸಂಖ್ಯಾತರ ಕಲ್ಯಾಣ ಮಂತ್ರಾಲಯದ ಅಧಿಸೂಚನೆ ದಿನಾಂಕ: 27.01.2014.
3. ಸರ್ಕಾರದ ಸಮಾಜ ಕಲ್ಯಾಣ ಇಲಾಖೆಯ (ಅಲ್ಪಸಂಖ್ಯಾತರ ಕಲ್ಯಾಣ) ರವರ ಅಧಿಸೂಚನೆ ಸಂಖ್ಯೆ: ಎಸ್‌ಡಬ್ಲ್ಯೂಡಿ(ಎಮ್‌ಡಬ್ಲ್ಯೂ) 04 ಎಲ್‌ಎಮ್‌ಎಲ್ 2007; ದಿನಾಂಕ: 17.09.2007.
4. ಸರ್ಕಾರದ ಅಧೀನ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ಭೂಮಾಪನ) ರವರ ಪತ್ರ ಸಂಖ್ಯೆ: ಕಂಇ 77 ಎಜೆಎಸ್ 2016; ದಿನಾಂಕ: 27.03.2017.

* * * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ಅಲ್ಪಸಂಖ್ಯಾತರ ಕಲ್ಯಾಣ ಮಂತ್ರಾಲಯದ ಉಲ್ಲೇಖ (1) ಮತ್ತು (2) ರ ಅಧಿಸೂಚನೆಯಲ್ಲಿ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಬೌದ್ಧರು, ಪಾರ್ಸಿ ಮತ್ತು ಜೈನ್ ಜನಾಂಗದವರನ್ನು ಅಲ್ಪಸಂಖ್ಯಾತರೆಂದು ಘೋಷಿಸಲಾಗಿದ್ದು, ಅದರಂತೆ, ಸದರಿ ಜನಾಂಗದವರನ್ನು ಅಲ್ಪಸಂಖ್ಯಾತರ ಜನಾಂಗವೆಂದು ಘೋಷಿಸಿ ಉಲ್ಲೇಖ (3) ರ ಸಮಾಜ ಕಲ್ಯಾಣ ಇಲಾಖೆಯಿಂದ ಅಧಿಸೂಚನೆ ಹೊರಡಿಸಲಾಗಿರುತ್ತದೆ.

ಈ ಕುರಿತಂತೆ, ಅಲ್ಪಸಂಖ್ಯಾತರೆಂದು ಪರಿಗಣಿಸಿ ಘೋಷಿಸಿರುವ ಜನಾಂಗದವರಿಗೆ ಅಲ್ಪಸಂಖ್ಯಾತರ ದೃಢೀಕರಣ ಪತ್ರವನ್ನು ನಾಡಕಛೇರಿ ತಂತ್ರಾಂಶದ ಮೂಲಕ ವಿತರಿಸಬೇಕೆಂದು ಉಲ್ಲೇಖ(4) ರ ಸರ್ಕಾರದ ಪತ್ರದಲ್ಲಿ ನಿರ್ದೇಶಿಸಲಾಗಿದ್ದು, ಅದರಂತೆ, ಅಲ್ಪಸಂಖ್ಯಾತ ಜನಾಂಗದವರಾದ ಮುಸ್ಲಿಂ, ಕ್ರಿಶ್ಚಿಯನ್, ಸಿಖ್, ಬೌದ್ಧರು, ಪಾರ್ಸಿ ಮತ್ತು ಜೈನ್ ಸಮುದಾಯದವರಿಗೆ ಮತೀಯ ಅಲ್ಪಸಂಖ್ಯಾತರ ದೃಢೀಕರಣ ಪತ್ರವನ್ನು ವಿತರಿಸಲು ಅರ್ಜಿ ನಮೂನೆ ಮತ್ತು ಅಲ್ಪಸಂಖ್ಯಾತರ ಪ್ರಮಾಣ ಪತ್ರಗಳನ್ನು ನಾಡಕಛೇರಿ ತಂತ್ರಾಂಶದಲ್ಲಿ ಮೇ-2017 ರ ಮಾಹೆಯಲ್ಲಿ ಅಳವಡಿಸಲಾಗಿರುತ್ತದೆ.

ಆದ್ದರಿಂದ, ಅಲ್ಪಸಂಖ್ಯಾತರ ಪ್ರಮಾಣ ಪತ್ರ ಕೋರಿ ನಾಡಕಛೇರಿಗಳಲ್ಲಿ ಅರ್ಜಿಯನ್ನು ಸಲ್ಲಿಸುವ ಅರ್ಜಿದಾರರಿಗೆ ನಿಯಮಾನುಸಾರ ಪರಿಶೀಲಿಸಿ, ಅಲ್ಪಸಂಖ್ಯಾತ ಪ್ರಮಾಣ ಪತ್ರವನ್ನು ತಂತ್ರಾಂಶದ ಮೂಲಕ ವಿತರಿಸಲು ತಮ್ಮಿಂದ ಸಂಬಂಧಿಸಿದ ತಾಲ್ಲೂಕು ತಹಶೀಲ್ದಾರರುಗಳಿಗೆ ಅಗತ್ಯ ನಿರ್ದೇಶನ ನೀಡಬೇಕೆಂದು ತಿಳಿಸಿದೆ.

ತಮ್ಮ ವಿಶ್ವಾಸಿ,

ಆಯುಕ್ತರು,
ಭೂಮಾಪನ ಕಂದಾಯ ವ್ಯವಸ್ಥೆ ಮತ್ತು
ಭೂದಾಖಲೆಗಳ ಇಲಾಖೆ ಮತ್ತು
ನಿರ್ದೇಶಕರು,